ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560012**

ಸಂಖ್ಯೆ: ಪಪೂಶಿಇ/ಶೈ.ಶಾ/ರನಿಕು/2020–21 ದಿನಾಂಕ: 18 /05/2021

## ಸುತ್ತೋಲೆ

ವಿಷಯ:– 2020–21ನೇ ಸಾಲಿನ ಶೈಕ್ಷಣಿಕ ವರ್ಷದ ಬೇಸಿಗೆ ರಜೆಯನ್ನು ನಿಗದಿಪಡಿಸುವ ಕುರಿತು.

ಉಲ್ಲೇಖ:–
1. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020 ದಿನಾಂಕ 26–04–2021.
2. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020 ದಿನಾಂಕ 07–05–2021.
3. ಈ ಕಛೇರಿ ಸುತ್ತೋಲೆ ಸಂಖ್ಯೆ: ಪಪೂಶಿಇ/ಪರೀಕ್ಷೆ/ದ್ವಿಪ್ರಾಪ/2020–21 ದಿನಾಂಕ: 04–05–2021.

****

ಕೋವಿಡ್–19ರ ಸಾಂಕ್ರಾಮಿಕ ರೋಗವು ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರವು ಉಲ್ಲೇಖ–1 ಮತ್ತು 2ರ ಆದೇಶಗಳಲ್ಲಿ ದಿನಾಂಕ: 24–05–2021 ರವರೆಗೆ ಲಾಕ್ ಡೌನ್ ಜಾರಿಗೊಳಿಸಿ ಸುರಕ್ಷತೆಯ ದೃಷ್ಟಿಯಿಂದ ಮಾರ್ಗಸೂಚಿಗಳನ್ನು ಬಿಡುಗಡೆಗೊಳಿಸಿದೆ. ಕೋವಿಡ್–19ರ ತೀವ್ರ ಏರಿಕೆ ಕಾರಣದಿಂದ ಹಾಗೂ ವಿದ್ಯಾರ್ಥಿಗಳ ಆರೋಗ್ಯದ ಹಿತ ದೃಷ್ಟಿಯಿಂದ ಉಲ್ಲೇಖ–3ರ ಸುತ್ತೋಲೆಯಲ್ಲಿ ಇಲಾಖೆಯು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯನ್ನು ಮುಂದೂಡಲಾಗಿತ್ತು.

ಮುಂದುವರೆದು, ರಾಜ್ಯದ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಉಪನ್ಯಾಸಕರುಗಳು ಮನೆಯಿಂದಲೇ ಕೆಲಸ ನಿರ್ವಹಿಸುವುದು. ಅವಶ್ಯವಿದ್ದಲ್ಲಿ ಮಾತ್ರ ಕಾಲೇಜಿಗೆ ಪ್ರಾಂಶುಪಾಲರ ನಿರ್ದೇಶನದ ಮೇರೆಗೆ ಆಗಮಿಸಿ ಕರ್ತವ್ಯ ನಿರ್ವಹಿಸುವುದು. ದ್ವಿತೀಯ ಪಿಯುಸಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ದೂರವಾಣಿ ಹಾಗೂ ಇತರೆ ಸಾಮಾಜಿಕ ಜಾಲತಾಣಗಳ ಮೂಲಕ ಮಾರ್ಗದರ್ಶನ ನೀಡುವುದು ಹಾಗೂ ಪಠ್ಯಕ್ರಮಕ್ಕೆ ಸಂಬಂಧಿಸಿದ ಸಂಶಯಗಳನ್ನು ಪರಿಹರಿಸುವುದು ಎಂದು ತಿಳಿಸಲಾಗಿತ್ತು.

ಅಲ್ಲದೆ ಸರ್ಕಾರವು ಉಲೇಖ–1 ಮತ್ತು –2ರ ಆದೇಶಗಳಲ್ಲಿ ಕೋವಿಡ್–19ರ ಪ್ರಕರಣಗಳು ಹೆಚ್ಚುತ್ತಿರುವುದನ್ನು ತಡೆಗಟ್ಟಲು ಶಾಲಾ–ಕಾಲೇಜುಗಳನ್ನು ಸಂಪೂರ್ಣವಾಗಿ ದಿನಾಂಕ 24–05–2021 ರವರೆಗೆ ಮುಚ್ಚಲು ಸೂಚಿಸಲಾಗಿದೆ. ಈ ಹಿನ್ನೆಲೆಯಲ್ಲಿ 2020–21ನೇ ಸಾಲಿನ ಬೇಸಿಗೆ ರಜೆಯ ಅವಧಿಯು ದಿನಾಂಕ 27–04–2021 ರಿಂದ 24–05–2021 ರವರೆಗೆ/ಲಾಕ್‌ಡೌನ್ ಇರುವವರೆಗೆ ನಿಗದಿಪಡಿಸಲಾಗಿದೆ.

**ಸೂಚನೆಗಳು:–**

1. ಈ ಮೇಲ್ಕಂಡ ವೇಳಾ ಪಟ್ಟಿಯು ತಾತ್ಕಾಲಿಕವಾಗಿದ್ದು, ಕೋವಿಡ್–19ರ ಹಿನ್ನೆಲೆಯಲ್ಲಿ ಪರಿಷ್ಕರಣೆಗೆ ಒಳಪಡುತ್ತದೆ.
2. ಕೋವಿಡ್–19ರ ಹಿನ್ನೆಲೆಯಲ್ಲಿ ಕಾಲಕಾಲಕ್ಕೆ ಸರ್ಕಾರ, ಇಲಾಖೆ ಮತ್ತು ಜಿಲ್ಲಾಡಳಿತಗಳು ನೀಡುವ ಸೂಚನೆಗಳನ್ನು ಮತ್ತು ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ತಿಳಿಸಿದೆ.

3. ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಇಲಾಖೆಯು ಹೊರಡಿಸಿರುವ ಹಾಗೂ ಮುಂದೆ ಹೊರಡಿಸುವ ನಿರ್ದೇಶನಗಳನ್ನು ಚಾಚೂ ತಪ್ಪದೇ ಪಾಲಿಸತಕ್ಕದ್ದು.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:-

1. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಜಿಲ್ಲೆಗಳ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಅಗತ್ಯ ಕ್ರಮಕ್ಕಾಗಿ
3. ಸಹಾಯಕ ನಿರ್ದೇಶಕರು, ಇ-ಆಡಳಿತ ಪಪೂಶಿಇ (ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಲು).
4. ಕಛೇರಿ ಪ್ರತಿ.